284 (ಶ್ರೀ ಪಾಟೀಲ್ ವಿ.ಎಸ್.(ಯಲ್ಲಾಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಡಸ್–ಕುಮಟಾ ರಾಜ್ಯ ಹೆದಾರಿಯನ್ನು ಖಾಸಗಿ ಸಹಭಾಗಿತ್ವದಡಿ ಅಭಿವೃದ್ಧಿಪಡಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆಯೇ;

ಆ) ತಡಸ್–ಕುಮಟಾ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ ಎಂದು ಪರಿಗಣಿಸುವ ಪ್ರಸ್ತಾವನೆಯು ಪರಿಗಣಿಸಲ್ಪಟ್ಟಿದೆಯೇ?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಹೌದು.

ಆ) ಈ ಹೆದ್ದಾರಿಯ 140.00 ಕಿ.ಮೀ. ಉದ್ದವನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ದಿನಾಂಕ:26–02–2009 ರಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

982 ಶ್ರೀ ಅಭಯಚಂದ್ರ ಜೈನ್ ಕೆ.ಎಂ.ಎಲ್.ಎ : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗಲಕೋಟೆಯಲ್ಲಿ ವಾಸವಾಗಿರುವ ಮಾಜಿ ಜಿಲ್ಲಾ ಪುನರ್ ವಿಂಗಡಣಾ ಸಮಿತಿ ಅಧ್ಯಕ್ಷರಿಗೆ ದೂರವಾಣಿ ಕರೆ ಮೂಲಕ ಹಾಗೂ ಅನಾಮಧೇಯ ಪತ್ರದ ಮೂಲಕ ಜೀವ ಬೆದರಿಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಯಾವ ಕಾರಣಕ್ಕೆ ಜೀವ ಬೆದರಿಕೆ ಬಂದಿದೆ (ವಿವರ ಒದಗಿಸಿ);

ಆ) ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಗಲಕೋಟೆ ಪೊಲೀಸು ವರಿಷ್ಠಾಧಿಕಾರಿಗಳಿಗೆ ಎರಡು ಬಾರಿ ದೂರು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಸರ್ಕಾರ ಪ್ರಕರಣಕ್ಕೆ ಸಂಬಂಧಿಸಿದಂತೆ ತೆಗೆದುಕೊಂಡಿರುವ ಕ್ರಮಗಳೇನು (ವಿವರ ಒದಗಿಸಿ)?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಹೌದು. ಶ್ರೀ ಟಿ.ಎಂ.ಹುಂಡೇಕಾರ್‌ರವರು ದಿನಾಂಕ: 2–6–09ರಲ್ಲಿ ಮತ್ತು 29–6–09ರಲ್ಲಿ ಪೊಲೀಸು ಅಧೀಕ್ಷಕರು, ಬಾಗಲಕೋಟೆ ಜಿಲ್ಲೆ ಅವರಿಗೆ ಮನವಿ ಸಲ್ಲಿಸಿ ತಮಗೆ ದೂರವಾಣಿ ಮೂಲಕ ಜೀವ ಬೆದರಿಕೆ ಬಂದಿರುವ ಬಗ್ಗೆ ಹಾಗೂ ತಮಗೆ ಜೀವ ರಕ್ಷಣೆ ನೀಡಬೇಕೆಂದು ಕೇಳಿರುತ್ತಾರೆ. ಸದರಿ ಮನವಿಯ ಬಗ್ಗೆ ಡಿ.ಎಸ್.ಪಿ ಬಾಗಲಕೋಟೆ ಇವರಿಗೆ ಸ್ಥಾನಿಕವಾಗಿ ವಿಚರಣೆ ಮಾಡಿ ಸೂಕ್ತ